# ಕಾವೇರಿಪುರದಲ್ಲಿ ಹೊಡೆದಾಟ

ಸಂ.ಕ. 30-5-19




ಕಾವೇರಿಪುರ ವಾರ್ಡ್‌ಗೆ ಬುಧವಾರ ನಡೆದ ಉಪಚುನಾವಣೆ ವೇಳೆ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಕ್ಷುಲ್ಲಕ ಕಾರಣ ಗಲಾಟೆ ನಡೆಯಿತು.

- ಪೊಲೀಸರಿಂದ ಲಾಠಿ ಪ್ರಹಾರ
- ಇಬ್ಬರಿಗೆ ಕಾರ್ಯಕರ್ತರಿಗೆ ಗಾಯ
- ಪರಸ್ಪರರಿಂದ ಠಾಣೆಯಲ್ಲಿ ದೂರು

ಸಂ.ಕ ಸಮಾಚಾರ ಬೆಂಗಳೂರು

ಬಿಬಿಎಂಪಿ ಕಾವೇರಿಪುರ ವಾರ್ಡ್ ಉಪಚುನಾವಣೆಯ ಮತದಾನದ ವೇಳೆ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಕೈ ಕೈ ಮಿಲಾಯಿಸಿದ್ದು, ಗಲಾಟೆಯನ್ನು ನಿಯಂತ್ರಿಸಲು ಪೊಲೀಸರು ಲಘು ಲಾಠಿ ಪ್ರಹಾರ ನಡೆಸಿದ್ದಾರೆ.

ಪಾಲಿಕೆಯ ಬಿಜೆಪಿ ಸದಸ್ಯ ಉಮೇಶ್ ಶೆಟ್ಟಿ, ದಾಸೇಗೌಡ, ಮೋಹನ್‌ಕುಮಾರ್ ಹಾಗೂ ಅವರ ಬೆಂಬಲಿಗರು ನಿನ್ನೆ ಮಧ್ಯಾಹ್ನ 12 ಗಂಟೆಯ ಸುಮಾರು ಕಾವೇರಿಪುರ ವಾರ್ಡ್‌ನ ಮುನೇಶ್ವರನಗರದಲ್ಲಿ ಮತದಾನ ಪ್ರಕ್ರಿಯೆ ವೀಕ್ಷಿಸಲು ಬಂದಿದ್ದರು.

ಈ ವೇಳೆ ಜೆಡಿಎಸ್ ನಗರ ಘಟಕದ ಅಧ್ಯಕ್ಷ ಪ್ರಕಾಶ್ ಹಾಗೂ ಕಾರ್ಯಕರ್ತರು ಆಕ್ಷೇಪ ವ್ಯಕ್ತಪಡಿಸಿದ್ದರು. ಇದೇ ವಿಚಾರಕ್ಕೆ ಎರಡು ಗುಂಪುಗಳ ನಡುವೆ ಮಾತಿಗೆ ಮಾತು ಬೆಳೆದಿದ್ದು, ಗಲಾಟೆ ವಿಕೋಪಕ್ಕೆ ತಿರುಗಿತ್ತು. ಎರಡು ಪಕ್ಷಗಳ ಕಾರ್ಯಕರ್ತರು ದೊಣ್ಣೆ ಹಿಡಿದು ಪರಸ್ಪರ ಬಡಿದಾಡಿಕೊಂಡಿದ್ದಾರೆ. ಕೂಡಲೇ ಎಚ್ಚೆತ್ತುಕೊಂಡ ಪೊಲೀಸರು ಲಘು ಲಾಠಿ ಪ್ರಹಾರ ನಡೆಸಿ ಗಲಾಟೆಯನ್ನು ನಿಯಂತ್ರಿಸಿದ್ದಾರೆ.

ಗಲಾಟೆಯಲ್ಲಿ ಜೆಡಿಎಸ್ ಪಕ್ಷದ ಇಬ್ಬರು ಕಾರ್ಯಕರ್ತರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ. ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆಂದು ಪೊಲೀಸರು ಹೇಳಿದ್ದಾರೆ.

ಬಡಿದಾಡಿಕೊಂಡ ಎರಡು ಪಕ್ಷಗಳ ಕಾರ್ಯಕರ್ತರು ಪರಸ್ಪರ ಆರೋಪ ಮತ್ತು ಪತ್ಯಾರೋಪಗಳ ಮೂಲಕ ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಹಲ್ಲೆ, ಅವಾಚ್ಯ ಪದಗಳ ನಿಂದನೆ ಆರೋಪ ಹೊರಿಸಿದ್ದಾರೆ.

## ಗಲಾಟೆಯಿಂದ ಇಳಿಮುಖ

ಕಾವೇರಿಪುರ ಹಾಗೂ ಸಗಾಯಪುರ ವಾರ್ಡ್‌ಗಳಲ್ಲಿ ಅಭ್ಯರ್ಥಿಗಳು ಹಾಗೂ ಅವರ ಬೆಂಬಲಿಗರ ನಡುವೆ ಗಲಾಟೆ ಆದ ಸುದ್ದಿ ದೃಶ್ಯ ಮಾಧ್ಯಮದಲ್ಲಿ ಪ್ರಸಾರವಾಗುತ್ತಿದ್ದಂತೆ ಮತಗಟ್ಟೆಗಳತ್ತ ಧಾವಿಸುತ್ತಿದ್ದವರು ಮತ್ತೆ ಮನೆಗಳತ್ತ ವಾಪಸ್ ಬಂದಿದ್ದಾರೆಂದು ಸ್ಥಳೀಯರು ತಿಳಿಸಿದ್ದಾರೆ.

## ನೀರಸ ಮತದಾನ

ಬೆಂಗಳೂರು: ಉಪ ಮೇಯರ್ ರಮೀಳಾ ಉಮಾಶಂಕರ್ ಹಾಗೂ ಏಳುಮಲೈ ನಿಧನದಿಂದ ತೆರವಾಗಿರುವ ಕಾವೇರಿಪುರ ಮತ್ತು ಸಗಾಯ್‌ಪುರಂ ವಾರ್ಡ್‌ಗೆ ಇಂದು ನಡೆಯುತ್ತಿರುವ ಉಪ ಚುನಾವಣೆಗೆ ಮತದಾರರು ಆಸಕ್ತಿ ತೋರದೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಬೆಳಗ್ಗೆ 7ರಿಂದ ಸಂಜೆ 5ರವರೆಗೆ ನಡೆದ ಮತದಾನದಲ್ಲಿ ಕಾವೇರಿಪುರ ವಾರ್ಡ್‌ನಲ್ಲಿ ಶೇ. 39.54ರಷ್ಟು ಮತದಾನವಾಗಿದ್ದರೆ, ಸಗಾಯಪುರ ವಾರ್ಡ್‌ನಲ್ಲಿ ಶೇ. 44.82ರಷ್ಟು ಮತದಾನವಾಗಿದೆ. ಬೆಳಗ್ಗೆ 7 ಗಂಟೆಗೆ ಮತದಾನ ಆರಂಭಗೊಂಡರೂ ಮತದಾರರು ಮತದಾನಕ್ಕೆ ನಿರಾಸಕ್ತಿ ತೋರಿದ್ದಾರೆ. ಕೆಲವು ಮತಗಟ್ಟೆಗಳಲ್ಲಿ ಮತದಾರರು ಸರದಿ ಸಾಲಿನಲ್ಲಿ ನಿಂತಿದ್ದು ಕಂಡು ಬಂದಿತ್ತಾದರೂ 9 ಗಂಟೆಯ ನಂತರ ಮತಗಟ್ಟೆಗಳಲ್ಲಿ ಮತದಾರರು ಬಾರದೆ ಬಿಕೋ ಎನ್ನುತ್ತಿದ್ದವು.

ಕಾವೇರಿಪುರ ವಾರ್ಡ್‌ನಲ್ಲಿ ಒಟ್ಟು 49,238 ಮತದಾರರಿದ್ದು, 43 ಮತದಾನ ಕೇಂದ್ರಗಳನ್ನು ಸ್ಥಾಪಿಸಲಾಗಿತ್ತು. ಈ ವಾರ್ಡ್‌ನಲ್ಲಿ 19470 ಮತದಾರರು ಮಾತ್ರ ತಮ್ಮ ಹಕ್ಕನ್ನು ಚಲಾಯಿಸಿದ್ದರೆ, ಇನ್ನು, ಸಗಾಯ್‌ಪುರಂ ವಾರ್ಡ್‌ನಲ್ಲಿ 31,928 ಮತದಾರರಿದ್ದು, 33 ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಸಂಜೆ 5 ಗಂಟೆಯವರೆಗೂ ಮತದಾನಕ್ಕೆ ಅವಕಾಶ ಕಲ್ಪಿಸಿಕೊಡಲಾಗಿತ್ತು. ಆದರೆ, 14,310 ಮಂದಿ ಮಾತ್ರ ತಮ್ಮ ಹಕ್ಕನ್ನು ಚಲಾಯಿಸಿದ್ದಾರೆ.

ಕಾವೇರಿಪುರ ವಾರ್ಡ್‌ನಲ್ಲಿ ಬಿಜೆಪಿ ಅಭ್ಯರ್ಥಿ ಸಿ.ಪಲ್ಲವಿ ಹಾಗೂ ಮೈತ್ರಿ ಅಭ್ಯರ್ಥಿ ಸುಶೀಲಾ ನಡುವೆ ಬಿರುಸಿನ ಸ್ಪರ್ಧೆ ಕಂಡುಬಂದಿದ್ದರೆ, ಸಗಾಯ್‌ಪುರಂ ವಾರ್ಡ್‌ನಲ್ಲಿ ಬಿಜೆಪಿ ಅಭ್ಯರ್ಥಿ ಜೇಯರಿಮ್, ಮೈತ್ರಿ ಅಭ್ಯರ್ಥಿ ಪಳನಿಯಮ್ಮ, ಪಕ್ಷೇತರ ಅಭ್ಯರ್ಥಿ ಮಾರಿಮುತ್ತು ನಡುವೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿದೆ.

4